



ಅರುಣ ಪಿ. ಭಟ್ಟ


## ವಾರಭವಿಷ್ಯ: 06.03.2025ರಿಂದ 12.03.2025ರವರೆಗೆ




ನೀವು ಕೈಗೊಳ್ಳುವ ಕೆಲಸದಿಂದ ವಿಶ್ವಾಸಾರ್ಹತೆ ಹೆಚ್ಚಾಗುತ್ತದೆ. ಕೆಲವರು ನಿಮ್ಮನ್ನು ಅವಮಾನಕ್ಕೆ ಗುರಿ ಮಾಡಲಿದ್ದಾರೆ. ವಾರದ ಅಂತ್ಯಕ್ಕೆ ಸರಿಯುತ್ತಾ ಆರೋಗ್ಯ ಉತ್ತಮವಾಗಿದ್ದು, ಸಂತೋಷವಾಗಿ ಸಮಯ ಕಳೆಯಲಿದ್ದೀರಿ. ನಿಮ್ಮ ಕೆಲಸದ ಜೊತೆಗೆ ಆಹಾರ ಪಥ್ಯದ ಬಗ್ಗೆಯೂ ಕಾಳಜಿ ತೆಗೆದುಕೊಳ್ಳುತ್ತೀರಿ. ವ್ಯಾಪಾರಸ್ಥರಿಗೆ ಉತ್ತಮ ಲಾಭ. ಶುಭದಿನ: 09. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ನಿಮ್ಮ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸುವವರ ಸಂಖ್ಯೆ ಹೆಚ್ಚಾಗುತ್ತದೆ. ವ್ಯಾಪಾರದಲ್ಲಿ ಮುಂದಿರುತ್ತೀರಿ. ತೊಂದರೆಗಳನ್ನು ತಡೆಯುವ ಸಲುವಾಗಿ ನೀವು ಭಾರೀ ಶ್ರಮ ಹಾಕುತ್ತೀರಿ. ಕೋರ್ಟ್ ಕೇಸುಗಳಲ್ಲಿ ಸಮಸ್ಯೆಗಳನ್ನು ಎದುರಿಸುತ್ತೀರಿ. ವಿರೋಧಿ ಪಾಳಯದ ಪಿತೂರಿಯಿಂದ ಹಿನ್ನಡೆ ಅನುಭವಿಸಬೇಕಾಗುತ್ತದೆ. ವಾತಾವರಣದ ಬದಲಾವಣೆಯಿಂದ ಅನಾರೋಗ್ಯ ಕಾಡಬಹುದು. ಶುಭದಿನ: 10. ಕಾಲಭೈರವನ ಸೇವೆ ಮಾಡಿರಿ.





ವಾರದ ಆರಂಭದಿಂದಲೇ ಹಲವು ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಬೇಕಾಗುತ್ತದೆ. ಸಂಬಂಧಿಕರ ಜೊತೆ ಉತ್ತಮ ಸಮಯ ಕಳೆಯುವ ಸಾಧ್ಯತೆ. ವ್ಯವಹಾರದಲ್ಲಿ ಬಹಳ ಎಚ್ಚರಿಕೆಯಿಂದ ವ್ಯವಹರಿಸಿ. ವಾರದ ಅಂತ್ಯಕ್ಕೆ ವ್ಯಾಜ್ಯಗಳನ್ನು ಬಗೆಹರಿಸಿಕೊಳ್ಳಲು ಅವಕಾಶ ದೊರೆಯುತ್ತದೆ. ಸೋದರ ಸಂಬಂಧಿಗಳ ಜೊತೆಗೆ ಜಗಳ ಆಗುವ ಸಾಧ್ಯತೆಗಳಿವೆ. ಶುಭದಿನ: 11. ಈಶ್ವರನಿಗೆ ರುದ್ರಾಭಿಷೇಕ ಮಾಡಿಸಿ.





ವ್ಯಾಪಾರ ಕ್ಷೇತ್ರದಲ್ಲಿ ಇರುವವರ ಆದಾಯವು ಉತ್ತಮವಾಗಿರುತ್ತದೆ. ಮದುವೆ ವಿಚಾರವಾಗಿ ಸಂಬಂಧಿಕರ ಜೊತೆಗೆ ಮಾತುಕತೆ ನಡೆಸಲಿದ್ದೀರಿ. ಈ ವಾರ ಹಲವು ತುರ್ತು ಕೆಲಸಗಳನ್ನು ಪೂರ್ಣಗೊಳಿಸುವಲ್ಲಿ ನಿಮ್ಮ ಗಮನ ಕೇಂದ್ರೀಕೃತವಾಗಿರುತ್ತದೆ. ಇದಕ್ಕಾಗಿ ಕೆಲವರ ಸಹಾಯ ಪಡೆಯುವ ಸಾಧ್ಯತೆ ಇದೆ. ಕೆಲವು ಆರೋಗ್ಯ ಸಮಸ್ಯೆಗಳು ನಿಮ್ಮನ್ನು ಕಾಡಬಹುದು. ಶುಭದಿನ: 12. ಶಿವಕವಚ ಪಠಣ ಮಾಡಿರಿ.




ವಾರದ ಶುರುವಿನಿಂದಲೇ ಕೆಲಸಕ್ಕೆ ವೇಗ ನೀಡಲು ಬಹಳ ಪ್ರಯತ್ನ ಮಾಡುತ್ತೀರಿ. ನೀವು ಹಾಕಿದ ಶ್ರಮಕ್ಕೆ ತಕ್ಕ ಪ್ರತಿಫಲವನ್ನು ಪಡೆಯಲಿದ್ದೀರಿ. ಹಲವರ ಜೊತೆಗೆ ಏಕ ಕಾಲಕ್ಕೆ ಸಂಪರ್ಕ ಸಾಧಿಸಿ, ನಿಮ್ಮ ಕೆಲಸ ಕಾರ್ಯಗಳಿಗೆ ಬೇಕಾದ ಮಾಹಿತಿ ಕಲೆ ಹಾಕುತ್ತೀರಿ. ನಿಮ್ಮ ಆರೋಗ್ಯವು ಉತ್ತಮವಾಗಿ ಇರುತ್ತದೆ. ಸಂತೋಷದಿಂದ ಕಾಣಿಸಿಕೊಳ್ಳುತ್ತೀರಿ. ಶುಭದಿನ: 09. ಲಿಂಗಾಷ್ಟಕ ಪಠಣ ಮಾಡಿರಿ.





ನಿಮ್ಮ ವಿವೇಚನೆಯನ್ನು ಸಮರ್ಥವಾಗಿ ಬಳಸುವ ವ್ಯವಹಾರವನ್ನು ಇನ್ನಷ್ಟು ಉತ್ತಮವಾಗಿ ಮಾಡುತ್ತೀರಿ. ಕುಟುಂಬ ಸದಸ್ಯರ ಬಗ್ಗೆ ಹೆಚ್ಚು ಗಮನ ನೀಡುತ್ತೀರಿ. ಉದ್ಯೋಗಸ್ಥರಿಗೆ ಉದ್ಯೋಗ ಸ್ಥಳದಲ್ಲಿ ಸಹೋದ್ಯೋಗಿಗಳ ಜೊತೆ ಉದ್ವಿಗ್ನ ಸನ್ನಿವೇಶ ಎದುರಾಗುತ್ತದೆ. ನಿಮ್ಮ ಬಹುತೇಕ ಸಮಸ್ಯೆಗಳಿಗೆ ಪರಿಹಾರಗಳು ದೊರೆಯುತ್ತವೆ. ವಿರಾಮಕ್ಕೆ ಸಮಯ ದೊರೆಯುತ್ತದೆ. ಶುಭದಿನ: 10. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಈ ವಾರ ಕೌಟುಂಬಿಕ ಹಾಗೂ ವೈಯಕ್ತಿಕ ಸಮಸ್ಯೆಗಳ ಬಗ್ಗೆ ಹೆಚ್ಚಿನ ಎಚ್ಚರಿಕೆ ವಹಿಸಿ. ಸಣ್ಣ ವಿಚಾರ ಕೂಡ ದೊಡ್ಡ ಬಿಕ್ಕಟ್ಟಾಗುವ ಸಾಧ್ಯತೆ ಇದೆ. ಕೌಟುಂಬಿಕ ವಿಚಾರದಲ್ಲಿ ಕ್ರಮೇಣ ಪ್ರಗತಿ ಕಾಣುತ್ತದೆ. ವಾರದ ದ್ವಿತೀಯಾರ್ಧದಲ್ಲಿ ದಾನ ಧರ್ಮ ಕಾರ್ಯಗಳಲ್ಲಿ ತೊಡಗಿಸಿಕೊಳ್ಳುತ್ತೀರಿ. ವ್ಯಾಪಾರವನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಮಾಡುವುದಕ್ಕೆ ಅವಕಾಶ ದೊರೆಯುತ್ತದೆ. ಶುಭದಿನ: 11. ಸೌಂದರ್ಯ ಲಹರಿ ಪಠಿಸಿರಿ.





ವಾರದ ಮೊದಲ ಭಾಗದಿಂದಲೇ ಆರೋಗ್ಯವಾಗಿ ಇರುತ್ತೀರಿ. ಮುಖ್ಯವಾದ ವ್ಯವಹಾರವೊಂದರ ಭಾಗೀದಾರರಾಗುವ ಸಾಧ್ಯತೆಯಿದೆ. ರಾಜಕಾರಣಿಗಳು ಹೆಚ್ಚಿನ ಜವಾಬ್ದಾರಿ ವಹಿಸಿಕೊಳ್ಳಬೇಕಾಗುತ್ತದೆ. ಖರೀದಿ ಮಾಡಬೇಕು ಎಂದು ನೀವು ಲೆಕ್ಕ ಹಾಕಿದ ಭೂಮಿಯೊಂದರ ಪರಿಶೀಲನೆ ನಡೆಸುವ ಸಾಧ್ಯತೆ ಇದೆ. ವರ್ಗಾವಣೆ ಆಗುವ ಸಾಧ್ಯತೆ ಇದೆ. ಶುಭದಿನ: 12. ಲಕ್ಷ್ಮೀ ನಾರಾಯಣ ಹೃದಯ ಪಠಿಸಿರಿ.




ವಾರದ ಶುರುವಿನಿಂದಲೇ ವ್ಯಾಪಾರಸ್ಥರು ಉದ್ಯೋಗಸ್ಥರು ತಮ್ಮ ವ್ಯಾಪಾರ ಉದ್ಯಮದ ಪ್ರಗತಿಯ ಪರಿಶೀಲನೆ ಮಾಡುವುದರಲ್ಲಿ ಸಕ್ರಿಯರಾಗುತ್ತೀರಿ. ನಿಮ್ಮ ಕೆಲಸ ಕಾರ್ಯಗಳನ್ನು ಪೂರ್ಣ ಮಾಡಲು ಹೆಚ್ಚು ಹಣ ಖರ್ಚು ಮಾಡಬೇಕಾಗುತ್ತದೆ. ಈ ಅವಧಿಯಲ್ಲಿ ಒಬ್ಬರು ಹೇಳುವುದನ್ನು ಮತ್ತೊಬ್ಬರು ಕೇಳಿಸಿಕೊಳ್ಳಲು ಸಿದ್ಧರಿಲ್ಲದ ಕಾರಣ ಸಮಸ್ಯೆ ದೊಡ್ಡದಾಗುತ್ತದೆ. ಶುಭದಿನ: 09. ವಿಷ್ಣು ಸಹಸ್ರನಾಮ ಓದಿರಿ.




ಈ ವಾರ ಬಹಳ ಸಂತೋಷವಾಗಿ ಇರುತ್ತೀರಿ. ಆದಾಯಕ್ಕೆ ಸಂಬಂಧಿಸಿದ ಮೂಲಗಳಿಂದ ಉತ್ತಮ ಲಾಭದ ಅವಕಾಶ ಇದೆ. ವಿದ್ಯಾರ್ಥಿಗಳಿಗೆ ಯಶಸ್ಸು ಪಡೆಯುವ ಅವಕಾಶಗಳು ದೊರೆಯಲಿವೆ. ಮನೆಯಲ್ಲಿ ಮದುವೆಯ ವಿಚಾರವನ್ನು ಅಂತಿಮಗೊಳಿಸುವ ಅವಕಾಶ ಇದೆ. ಕ್ರೀಡಾ ಕ್ಷೇತ್ರದಲ್ಲಿ ಇರುವವರು ಅತ್ಯುತ್ತಮ ಸಾಧನೆ ಮಾಡಲು ಅವಕಾಶ ದೊರೆಯಲಿದೆ. ಶುಭದಿನ: 07. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ವಾರದ ಶುರುವಿನಿಂದಲೇ ಉದ್ಯೋಗ ಕ್ಷೇತ್ರದಲ್ಲಿ ಅದ್ಭುತ ಸಾಧನೆ ಮಾಡುವ ಅವಕಾಶಗಳಿವೆ. ನಿಮ್ಮ ಪಾಲಿಗೆ ದೊರೆಯುವ ಅವಕಾಶಗಳನ್ನು ಬಹಳ ಚೆನ್ನಾಗಿ ಬಳಸಿಕೊಳ್ಳಲಿದ್ದೀರಿ. ವ್ಯಾಪಾರಸ್ಥರು ಸ್ಥಳೀಯವಾಗಿ ವಿಶ್ವಾಸಾರ್ಹತೆಯನ್ನು ಹೆಚ್ಚಿಸಿಕೊಳ್ಳುತ್ತೀರಿ. ಪೋಷಕರಿಗೆ ಹೆಚ್ಚಿನ ಗೌರವ ನೀಡುತ್ತೀರಿ. ನಿಮ್ಮ ಆದಾಯ ಉತ್ತಮವಾಗಿರುತ್ತದೆ. ಸಾಮಾಜಿಕವಾಗಿ ಗೌರವ ಪಡೆಯಲಿದ್ದೀರಿ. ಶುಭದಿನ: 12. ಸುಬ್ರಮಣ್ಯ ಜಪ ಮಾಡಿರಿ.




ಸಣ್ಣ ಪ್ರವಾಸ ಮಾಡಬೇಕಾಗಿ ಬರುತ್ತದೆ. ಸಂಸ್ಥೆಯ ಜೊತೆ ಮಹತ್ತರವಾದ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆ ಇದೆ. ಕುಟುಂಬದ ಬಗ್ಗೆ ಹೆಚ್ಚು ಯೋಚನೆ ಮಾಡಲಿದ್ದೀರಿ. ಹಲವು ಒಳ್ಳೆಯ ಅವಕಾಶಗಳು ನಿಮ್ಮ ಪಾಲಿಗೆ ದೊರೆಯಲಿವೆ. ವ್ಯಾಸಂಗದಲ್ಲಿ ವಿದ್ಯಾರ್ಥಿಗಳಿಗೆ ಪ್ರಗತಿ ಇದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಆದಾಯದಲ್ಲಿ ಹೆಚ್ಚಳ ಆಗುತ್ತದೆ. ಶುಭದಿನ: 10. ಶ್ರೀ ದುರ್ಗಾ ಆರಾಧನೆ ಮಾಡಿರಿ.